All India Radio: Bangalore
National Bulletin In Kannada
17.02.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಮುಂಬೈನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಭೇಟಿ ; ಕಾರ್ಯತಂತ್ರದ ಪಾಲುದಾರಿಕೆಯ ಪ್ರಗತಿ ಪರಿಶೀಲನೆ
2. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ; ೨ನೇ ದಿನವಾದ ಇಂದು ಅನ್ವಯಿಕ ಎಐ ಕುರಿತ ಕೇಂದ್ರೀಕೃತ ಸಮ್ಮೇಳನ ಆಯೋಜನೆ
3. ಬೆಂಗಳೂರಿನಲ್ಲಿಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್-ಫ್ರಾನ್ಸ್ ಸಚಿವರ ಸಹ ಅಧ್ಯಕ್ಷತೆಯಲ್ಲಿ ೬ನೇ ವಾರ್ಷಿಕ ರಕ್ಷಣಾ ಸಂವಾದ
4. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಆಸ್ಟ್ರೇಲಿಯಾ ವಿರುದ್ಧ ಗೆದ್ದು ಸೂಪರ್-೮ರ ಹಂತದಲ್ಲಿ ಸ್ಥಾನ ಭದ್ರಪಡಿಸಿಕೊಂಡ ಶ್ರೀಲಂಕಾ

<><><><>

ಪ್ರಧಾನಿ ನರೇಂದ್ರ ಮೋದಿ ಮುಂಬೈನಲ್ಲಿ ಇಂದು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ, ಇಬ್ಬರೂ ನಾಯಕರು ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ಆಗಿರುವ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ. ಇದರ ಜೊತೆಗೆ ಪ್ರಾದೇಶಿಕ ಮತ್ತು ಜಾಗತಿಕ ಪ್ರಾಮುಖ್ಯತೆಯ ವಿಷಯಗಳ ಕುರಿತು ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಅಧ್ಯಕ್ಷ ಮ್ಯಾಕ್ರನ್ ಇಂದು ಭಾರತಕ್ಕೆ ಮೂರು ದಿನಗಳ ಅಧಿಕೃತ ಭೇಟಿ ನೀಡಲಿದ್ದಾರೆ. ಇದು ಅಧ್ಯಕ್ಷ ಮ್ಯಾಕ್ರನ್ ಅವರ ಭಾರತಕ್ಕೆ ನಾಲ್ಕನೇ ಮತ್ತು ಮುಂಬೈಗೆ ಅವರ ಮೊದಲ ಭೇಟಿಯಾಗಿದೆ. ಅವರ ಚರ್ಚೆಗಳು ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಮತ್ತು ಅದನ್ನು ನವೀನ ಮತ್ತು ಉದಯೋನ್ಮುಖ ಕ್ಷೇತ್ರಗಳಿಗೆ ವೈವಿಧ್ಯಗೊಳಿಸುವತ್ತ ಗಮನಹರಿಸಲಿವೆ. ಸಂಜೆ, ಉಭಯ ನಾಯಕರು ಭಾರತ-ಫ್ರಾನ್ಸ್ ನಾವೀನ್ಯತೆಯ ವರ್ಷ ೨೦೨೬

ಅನ್ನು ಉದ್ಘಾಟಿಸಲಿದ್ದಾರೆ ಮತ್ತು ಎರಡೂ ದೇಶಗಳ ಉದ್ಯಮ ನಾಯಕರ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<><><><>

ಭಾರತ-ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯುತ್ತಿದೆ. ಐದು ದಿನಗಳ ಈ ಶೃಂಗಸಭೆಯು ಜಾಗತಿಕ ದಕ್ಷಿಣದಲ್ಲಿ ಆಯೋಜಿಸಲಾಗುತ್ತಿರುವ ಮೊದಲ ಜಾಗತಿಕ ಎಐ ಶೃಂಗಸಭೆಯಾಗಿದೆ. ಇಪ್ಪತ್ತು ರಾಷ್ಟ್ರಗಳ ವಿಶ್ವ ನಾಯಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ಆಡಳಿತವನ್ನು ಬಲಪಡಿಸುವ ಮತ್ತು ಸಾರ್ವಜನಿಕ ಸೇವಾ ವಿತರಣೆಯನ್ನು ಸುಧಾರಿಸುವ ಮೂಲಕ ಭಾರತದ ಅಭಿವೃದ್ಧಿ ಪಯಣದಲ್ಲಿ ಕೃತಕ ಬುದ್ಧಿಮತ್ತೆ ಪ್ರಮುಖ ಪಾತ್ರವಹಿಸುತ್ತಿದೆ. ಐದು ದಿನಗಳ ಶೃಂಗಸಭೆಯು ಆಡಳಿತ, ನಾವೀನ್ಯತೆ ಮತ್ತು ಸುಸ್ಥಿರ ಅಭಿವೃದ್ಧಿಯಲ್ಲಿ ಎಐ ನ ಪರಿವರ್ತನಾ ಸಾಮರ್ಥ್ಯವನ್ನು ಪ್ರದರ್ಶಿಸಲು ಮತ್ತು ಚರ್ಚಿಸಲು ಜಾಗತಿಕ ನಾಯಕರು, ನೀತಿ ನಿರೂಪಕರು, ತಂತ್ರಜ್ಞಾನ ಕಂಪನಿಗಳು, ನಾವೀನ್ಯಕಾರರು ಮತ್ತು ತಜ್ಞರನ್ನು ಒಟ್ಟುಗೂಡಿಸುತ್ತಿದೆ. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಎರಡನೇ ದಿನವಾದ ಇಂದು, ಉನ್ನತ ಮಟ್ಟದ ಚರ್ಚೆಗಳು ಮುಂದುವರಿಯಲಿದ್ದು, ಆದ್ಯತೆಯ ವಲಯಗಳಲ್ಲಿ ಸಂವಾದಗಳು ನಡೆಯಲಿವೆ. ಅನ್ವಯಿಕ ಎಐ ಕುರಿತು ಕೇಂದ್ರೀಕೃತ ಸಮ್ಮೇಳನದ ಜೊತೆಗೆ ಆರೋಗ್ಯ, ಇಂಧನ, ಶಿಕ್ಷಣ, ಕೃಷಿ, ಲಿಂಗ ಸಬಲೀಕರಣ ಮತ್ತು ಅಂಗವೈಕಲ್ಯಗಳಲ್ಲಿ ಎಐ ಕುರಿತು ಕೇಸ್‌ಬುಕ್‌ಗಳು ಸೇರಿದಂತೆ ಪ್ರಮುಖ ಜ್ಞಾನ ಸಂಕಲನಗಳ ಬಿಡುಗಡೆಯನ್ನು ಈ ದಿನ ಒಳಗೊಂಡಿರುತ್ತದೆ.

<><><><>

ನವದೆಹಲಿಯಲ್ಲಿ ಇಂದು ನಡೆಯಲಿರುವ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮತ್ತು ಶಿಕ್ಷಣ ರಾಜ್ಯ ಸಚಿವ ಜಯಂತ್ ಚೌಧರಿ ಭಾಗವಹಿಸಲಿದ್ದಾರೆ. ಇವರು "ಕೃತಕ ಬುದ್ಧಿಮತ್ತೆಯ ಗಡಿಗಳ ಪ್ರಗತಿ" ಎಂಬ ವಿಷಯ ಕುರಿತು ಉಪನ್ಯಾಸ ನೀಡಲಿದ್ದಾರೆ. ಈ ಅಧಿವೇಶನವು ರಾಷ್ಟ್ರೀಯ ಶಿಕ್ಷಣ ನೀತಿಯ ದೃಷ್ಟಿಕೋನ ಮತ್ತು ವಿಕಸಿತ ಭಾರತ-೨೦೪೭ರ ರಾಷ್ಟ್ರೀಯ ಗುರಿಯೊಂದಿಗೆ ಹೊಂದಿಕೆಯಾಗುತ್ತದೆ ಎಂದು ಸಚಿವಾಲಯ ತಿಳಿಸಿದೆ. ಕಳೆದ ದಶಕದಲ್ಲಿ, ಸಚಿವಾಲಯವು ಡಿಜಿಟಲ್ ವೇದಿಕೆಗಳು, ನೀತಿ ಚೌಕಟ್ಟುಗಳು, ಸಾಂಸ್ಥಿಕ ಸುಧಾರಣೆಗಳು ಮತ್ತು ಶಾಲಾ ಶಿಕ್ಷಣ, ಉನ್ನತ ಶಿಕ್ಷಣ, ಕೌಶಲ್ಯ, ಸಂಶೋಧನೆ ಮತ್ತು

ನಾವೀನ್ಯತೆಗಳಾದ್ಯಂತ ದೊಡ್ಡ ಪ್ರಮಾಣದ ಸಾಮರ್ಥ್ಯ ನಿರ್ಮಾಣದ ಮೂಲಕ ಎಐ-ಸಕ್ರಿಯಗೊಳಿಸಿದ ಶಿಕ್ಷಣಕ್ಕೆ ಅಡಿಪಾಯ ಹಾಕಿದೆ ಎಂದು ಸಚಿವಾಲಯ ಅಭಿಪ್ರಾಯಪಟ್ಟಿದೆ.

<><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಫ್ರಾನ್ಸ್ ಸಚಿವ ಕ್ಯಾಥರೀನ್ ವೌಟ್ರಿನ್ ಇಂದು ಬೆಂಗಳೂರಿನಲ್ಲಿ ನಡೆಯಲಿರುವ ೬ನೇ ಭಾರತ-ಫ್ರಾನ್ಸ್ ವಾರ್ಷಿಕ ರಕ್ಷಣಾ ಸಂವಾದದ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ಈ ಸಭೆಯು ಕೈಗಾರಿಕಾ ಸಹಯೋಗವನ್ನು ವಿಸ್ತರಿಸುವತ್ತ ಗಮನಹರಿಸಿ ದ್ವಿಪಕ್ಷೀಯ ರಕ್ಷಣಾ ಸಹಕಾರದ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಲಿದೆ. ಸಭೆಯ ಸಂದರ್ಭದಲ್ಲಿ, ರಕ್ಷಣಾ ಸಹಕಾರ ಒಪ್ಪಂದವನ್ನು ಇನ್ನೂ ೧೦ ವರ್ಷಗಳ ಕಾಲ ನವೀಕರಿಸುವ ನಿರೀಕ್ಷೆಯಿದೆ, ಹ್ಯಾಮರ್ ಕ್ಷಿಪಣಿಗಳ ತಯಾರಿಕೆಗಾಗಿ ಜಂಟಿ ಉದ್ಯಮದ ಕುರಿತು ಒಪ್ಪಂದಕ್ಕೆ ಎರಡೂ ರಕ್ಷಣಾ ಸಚಿವರ ಸಮ್ಮುಖದಲ್ಲಿ ಸಹಿ ಹಾಕುವ ಸಾಧ್ಯತೆಯಿದೆ. ಭಾರತೀಯ ಸೇನೆ ಮತ್ತು ಫ್ರಾನ್ಸ್ ಭೂ ಪಡೆಗಳ ಸ್ಥಾಪನೆಗಳಲ್ಲಿ ಅಧಿಕಾರಿಗಳ ಪರಸ್ಪರ ನಿಯೋಜನೆಗೆ ಸಂಬಂಧಿಸಿದಂತೆ ಘೋಷಣೆಯನ್ನು ಸಹ ನಿರೀಕ್ಷಿಸಲಾಗಿದೆ. ಕರ್ನಾಟಕದ ವೇಮಗಲ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಟಾಟಾ ಏರ್‌ಬಸ್‌ನ ಎಚ್-೧೨೫ ಲೈಟ್ ಯುಟಿಲಿಟಿ ಹೆಲಿಕಾಪ್ಟರ್‌ನ ಅಂತಿಮ ಜೋಡನಾ ಘಟಕದ ವರ್ಚುವಲ್ ಉದ್ಘಾಟನೆಗೆ ಇಬ್ಬರು ಸಚಿವರು ಸಾಕ್ಷಿಯಾಗುವ ನಿರೀಕ್ಷೆಯಿದೆ. ೨೦೨೫ರ ಅಕ್ಟೋಬರ್ ೧೨ ರಂದು ಫ್ರಾನ್ಸ್ ರಕ್ಷಣಾ ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ಸಚಿವರಾದ ಕ್ಯಾಥರೀನ್ ವೌಟ್ರಿನ್ ಭಾರತಕ್ಕೆ ಅವರ ಮೊದಲ ಭೇಟಿ ಇದಾಗಿದೆ. ಭಾರತ-ಫ್ರಾನ್ಸ್ ವಾರ್ಷಿಕ ರಕ್ಷಣಾ ಸಂವಾದವು ರಕ್ಷಣಾ ಮತ್ತು ಭದ್ರತಾ ಸಹಕಾರವನ್ನು ಪರಿಶೀಲಿಸಲು ಮತ್ತು ಮಾರ್ಗದರ್ಶನ ನೀಡಲು ರಚನಾತ್ಮಕ ಸಚಿವ ಮಟ್ಟದ ದ್ವಿಪಕ್ಷೀಯ ಸಭೆಯಾಗಿದೆ.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಆಂಧ್ರಪ್ರದೇಶಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದು, ಅಂತಾರಾಷ್ಟ್ರೀಯ ನೌಕಾಪಡೆಗಳ ವಿಮರ್ಶೆ ೨೦೨೬ ಅನ್ನು ವೀಕ್ಷಿಸಲಿದ್ದಾರೆ. ಇಂದು ಸಂಜೆ ಅವರು ವಿಶಾಖಪಟ್ಟಣಕ್ಕೆ ಆಗಮಿಸಲಿದ್ದು, ಆಂಧ್ರಪ್ರದೇಶದ ರಾಜ್ಯಪಾಲ ಎಸ್. ಅಬ್ದುಲ್ ನಜೀರ್ ಮತ್ತು ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರ ಸ್ವಾಗತವನ್ನು ಸ್ವೀಕರಿಸಲಿದ್ದಾರೆ. ಬಳಿಕ ಅವರಿಗೆ ಔತಣಕೂಟ ಆಯೋಜಿಸಲಾಗುವುದು. ನಾಳೆ,

ರಾಷ್ಟ್ರಪತಿಯವರು ಸಶಸ್ತ್ರ ಪಡೆಗಳ ಸರ್ವೋಚ್ಚ ಕಮಾಂಡರ್ ಆಗಿ ಐಎಫ್‌ಆರ್- ೨೦೨೬ ಅನ್ನು ವೀಕ್ಷಿಸಲಿದ್ದಾರೆ. ಅವರು ವಿಶಾಖಪಟ್ಟಣಂ ಕರಾವಳಿಯಲ್ಲಿ ಭಾರತ ಮತ್ತು ಮಿತ್ರ ರಾಷ್ಟ್ರಗಳಿಂದ ಹಡಗುಗಳು, ಜಲಾಂತರ್ಗಾಮಿ ನೌಕೆಗಳು ಮತ್ತು ವಿಮಾನಗಳ ಪ್ರಭಾವಶಾಲಿ ಶ್ರೇಣಿಯನ್ನು ಪರಿಶೀಲಿಸಲಿದ್ದಾರೆ. "ಸಾಗರಗಳ ಮೂಲಕ ಒಗ್ಗೂಡಿ, ಸ್ನೇಹ ಸೇತುವೆಗಳನ್ನು ಬಲಪಡಿಸುವುದು" ಎಂಬ ವಿಷಯದ ಅಡಿಯಲ್ಲಿ ಭಾರತೀಯ ನೌಕಾಪಡೆಯು ಆಯೋಜಿಸಿರುವ ಈ ವಿಮರ್ಶೆಯು ಸಮುದ್ರ ಸಾಮರ್ಥ್ಯ, ಸಹಕಾರ ಮತ್ತು ಸಮುದ್ರದಲ್ಲಿ ಭಾರತದ ಸಾರ್ವಭೌಮ ಮೇಲ್ವಿಚಾರಣೆಯನ್ನು ಪ್ರದರ್ಶಿಸುತ್ತದೆ.

<><><>

ಸಿಬಿಎಸ್‌ಇ ವಿದ್ಯಾರ್ಥಿಗಳು ೧೦ನೇ ತರಗತಿಯ ಮೊದಲ ಬೋರ್ಡ್ ಪರೀಕ್ಷೆಗೆ ಕಡ್ಡಾಯವಾಗಿ ಹಾಜರಾಗಬೇಕೆಂದು ಸೂಚಿಸಿದೆ. ಕೇಂದ್ರ ಮಾಧ್ಯಮಿಕ ಶಿಕ್ಷಣ ಮಂಡಳಿ ಈ ವರ್ಷದಿಂದ ಪ್ರಾರಂಭವಾಗುವ ಹೊಸ ೧೦ನೇ ತರಗತಿ ಬೋರ್ಡ್ ಪರೀಕ್ಷಾ ಯೋಜನೆಯ ಅರ್ಹತಾ ನಿಯಮಗಳ ಕುರಿತು ಅಧಿಕೃತ ಸ್ಪಷ್ಟೀಕರಣದಲ್ಲಿ ಈ ವಿಷಯವನ್ನು ಸ್ಪಷ್ಟಪಡಿಸಿದೆ. ವಿದ್ಯಾರ್ಥಿಗಳು ಮತ್ತು ಪೋಷಕರಿಂದ ಬಂದ ಹಲವು ಪ್ರಶ್ನೆಗಳ ಹಿನ್ನೆಲೆಯಲ್ಲಿ, ಮೊದಲ ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗದಿದ್ದರೆ ಎರಡನೇ ಪರೀಕ್ಷೆಗೆ ಹಾಜರಾಗಬಹುದೇ ಎಂಬುದರ ಬಗ್ಗೆ ಮಾರ್ಗದರ್ಶನ ನೀಡಲಾಗಿದೆ. ಮೊದಲ ಬೋರ್ಡ್ ಪರೀಕ್ಷೆಗೆ ಹಾಜರಾಗುವುದು ಎಲ್ಲಾ ವಿದ್ಯಾರ್ಥಿಗಳಿಗೆ ಕಡ್ಡಾಯ. ಮೊದಲ ಪರೀಕ್ಷೆಯಲ್ಲಿ ಮೂರು ಅಥವಾ ಹೆಚ್ಚು ವಿಷಯಗಳನ್ನು ತಪ್ಪಿಸಿದರೆ, ಅವರು ಎರಡನೇ ಪರೀಕ್ಷೆಗೆ ಅರ್ಹರಾಗುವುದಿಲ್ಲ.

<><><>

ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಅವರು ಇಂದು ಗಾಂಧಿನಗರದಲ್ಲಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಹಕಾರ ಸಚಿವರ ಉನ್ನತ ಮಟ್ಟದ ಮಂಥನ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಹಕಾರ ಸಚಿವಾಲಯವು ಪ್ರಮುಖ ಉಪಕ್ರಮಗಳ ಸಮಗ್ರ ವಿಮರ್ಶೆ, ಪ್ರಗತಿಯ ಮೌಲ್ಯಮಾಪನ, ರಾಜ್ಯಗಳಿಂದ ಉತ್ತಮ ಅಭ್ಯಾಸಗಳು ಮತ್ತು ಅನುಭವಗಳ ವಿನಿಮಯ ಮತ್ತು ಭವಿಷ್ಯಕ್ಕಾಗಿ ಸಂಘಟಿತ ಮಾರ್ಗಸೂಚಿಯನ್ನು ಸಿದ್ಧಪಡಿಸಲು ವೇದಿಕೆಯು ಅನುವು ಮಾಡಿಕೊಡುತ್ತದೆ ಎಂದು ಸಹಕಾರ ಸಚಿವಾಲಯ ತಿಳಿಸಿದೆ. ಗ್ರಾಮೀಣ ಆರ್ಥಿಕತೆಗೆ ಹೊಸ ಆವೇಗವನ್ನು ನೀಡುವ ಗುರಿಯನ್ನು ಹೊಂದಿರುವ ೨ ಲಕ್ಷ ಹೊಸ ಬಹುಪಯೋಗಿ ಪ್ರಾಥಮಿಕ ಕೃಷಿ

ಸಾಲ ಸಂಘಗಳು, ಡೈರಿ ಮತ್ತು ಮೀನುಗಾರಿಕೆ ಸಹಕಾರ ಸಂಘಗಳನ್ನು ಸ್ಥಾಪಿಸುವ ಪ್ರಗತಿಯನ್ನು ಚರ್ಚೆಗಳು ಒಳಗೊಂಡಿರುತ್ತವೆ. ರಫ್ತು, ಸಾವಯವ ಕೃಷಿ ಮತ್ತು ಗುಣಮಟ್ಟದ ಬೀಜ ಪೂರೈಕೆಯ ಕ್ಷೇತ್ರಗಳಲ್ಲಿ ಸಹಕಾರಿಗಳನ್ನು ಬಲಪಡಿಸಲು ಹೊಸದಾಗಿ ರೂಪುಗೊಂಡ ರಾಷ್ಟ್ರೀಯ ಮಟ್ಟದ ಸಹಕಾರಿ ಸಂಸ್ಥೆಗಳಲ್ಲಿ ರಾಜ್ಯಗಳ ಪಾತ್ರ, ಭಾಗವಹಿಸುವಿಕೆ ಮತ್ತು ನಿರೀಕ್ಷೆಗಳ ಬಗ್ಗೆಯೂ ಸಭೆ ಗಮನಹರಿಸಲಿದೆ.

<><><>

ಬಾಂಗ್ಲಾದೇಶದ ಪ್ರಧಾನಿಯಾಗಿ ಬಿಎನ್‌ಪಿ ಅಧ್ಯಕ್ಷ ತಾರಿಕ್ ರೆಹಮಾನ್ ಅವರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಇಂದು ಭಾಗವಹಿಸಲಿದ್ದಾರೆ. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಕೂಡ ಈ ಸಂದರ್ಭದಲ್ಲಿ ಉಪಸ್ಥಿತರಿರಲಿದ್ದಾರೆ. ಇತ್ತೀಚಿನ ಸಂಸತ್ ಚುನಾವಣೆಯಲ್ಲಿ ಬಾಂಗ್ಲಾದೇಶ ರಾಷ್ಟ್ರೀಯತಾವಾದಿ ಪಕ್ಷ-ಬಿಎನ್‌ಪಿ ನೇತೃತ್ವದ ಮೈತ್ರಿಕೂಟವು ಭರ್ಜರಿ ಜಯ ಸಾಧಿಸಿದೆ. ಈ ಕಾರ್ಯಕ್ರಮದಲ್ಲಿ ಓಂ ಬಿರ್ಲಾ ಅವರ ಭಾಗವಹಿಸುವಿಕೆಯು ಭಾರತ ಮತ್ತು ಬಾಂಗ್ಲಾದೇಶದ ಜನರ ನಡುವಿನ ಆಳವಾದ ಮತ್ತು ಶಾಶ್ವತವಾದ ಸ್ನೇಹವನ್ನು ಒತ್ತಿಹೇಳುತ್ತದೆ, ಹಾಗೂ ಪ್ರಜಾಪ್ರಭುತ್ವ ಮೌಲ್ಯಗಳಿಗೆ ಭಾರತದ ದೃಢವಾದ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಹೊಸದಾಗಿ ಉದ್ಘಾಟನೆಗೊಂಡಿರುವ ಪ್ರಧಾನ ಮಂತ್ರಿ ಕಚೇರಿ 'ಸೇವಾ ತೀರ್ಥ'ದಲ್ಲಿ ನಿನ್ನೆ ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರನ್ನು ಭೇಟಿಯಾದರು. ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರೊಂದಿಗಿನ ಭೇಟಿ ಮತ್ತು ವಿವಿಧ ವಿಷಯಗಳ ಕುರಿತು ಅವರ ಒಳನೋಟಗಳು ಯಾವಾಗಲೂ ಚಿಂತನಶೀಲವಾಗಿರುತ್ತವೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಮತ್ತೊಂದೆಡೆ, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಮಾಜಿ ರಾಷ್ಟ್ರಪತಿಗಳು, ಈ ಕಟ್ಟಡವು ನಿಜವಾಗಿಯೂ 'ನಾಗರಿಕ ದೇವೋ ಭವ' – ಸೇವೆ, ಕರುಣೆ, ಕರ್ತವ್ಯ ಮತ್ತು ರಾಷ್ಟ್ರ ಮೊದಲು ಎಂಬ ನುಡಿಯನ್ನು ಸಾಕಾರಗೊಳಿಸುತ್ತದೆ ಎಂದು ಹೇಳಿದರು.

<><><>

ಶ್ರೀಲಂಕಾದ ಪಲ್ಲೆಕೆಲೆ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಜಯ ಸಾಧಿಸುವ ಮೂಲಕ ಶ್ರೀಲಂಕಾ ತಂಡ ಸೂಪರ್-೮ರ ಹಂತಕ್ಕೆ ತನ್ನ ಸ್ಥಾನವನ್ನು ಖಚಿತಪಡಿಸಿಕೊಂಡಿದೆ. ಆಸ್ಟ್ರೇಲಿಯಾ ನೀಡಿದ್ದ ೧೮೨ ರನ್‌ಗಳ ಗುರಿಯನ್ನು ಬೆನ್ನತ್ತಿದ ಶ್ರೀಲಂಕಾ ತಂಡ ೧೮ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೮೪ ರನ್ ಗಳಿಸಿದೆ. ಪತುಮ್ ನಿಸ್ಸಂಕ ಕೇವಲ ೫೨ ಎಸೆತಗಳಲ್ಲಿ ಶತಕ ಸಿಡಿಸಿದರು. ಇದಕ್ಕೂ ಮುನ್ನ ಕೊಲ್ಕೊತ್ತಾದಲ್ಲಿ ನಡೆದ ದಿನದ ೨ನೇ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಇಟಲಿ ತಂಡವನ್ನು ೨೪ ರನ್‌ಗಳಿಂದ ಮಣಿಸಿತು. ಇಂದು ನಡೆಯಲಿರುವ ೩ ಪಂದ್ಯಗಳ ಪೈಕಿ, ಚೆನ್ನೈನಲ್ಲಿ ೧೧ ಗಂಟೆಗೆ ಆರಂಭವಾಗಲಿರುವ ದಿನದ ಮೊದಲ ಪಂದ್ಯದಲ್ಲಿ ನ್ಯೂಜಿಲೆಂಡ್ ಹಾಗೂ ಕೆನಡಾ ತಂಡಗಳು ಮುಖಾಮುಖಿಯಾಗಲಿವೆ. ಪಲ್ಲೆಕೆಲೆ ಕ್ರೀಡಾಂಗಣದಲ್ಲಿ ೩ ಗಂಟೆಗೆ ಆರಂಭವಾಗಲಿರುವ ದಿನದ ೨ನೇ ಪಂದ್ಯದಲ್ಲಿ ಐರ್ಲೆಂಡ್, ಜಿಂಬಾಬ್ವೆ ತಂಡವನ್ನು ಎದುರಿಸಲಿದೆ. ಮುಂಬೈನಲ್ಲಿ ಸಂಜೆ ೭ ಗಂಟೆಗೆ ನಡೆಯಲಿರುವ ದಿನದ ೩ನೇ ಪಂದ್ಯದಲ್ಲಿ ಸ್ಕಾಟ್‌ಲ್ಯಾಂಡ್ ಮತ್ತು ನೇಪಾಳ ತಂಡಗಳು ಸೆಣಸಾಟ ನಡೆಸಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>